ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

25

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 26/6/2020

# ಸಂಪನ್ಮೂಲ ಸಂಗ್ರಹಕ್ಕೆ ಮಾರಾಟ ಮಾರ್ಗ

## ಗುತ್ತಿಗೆ ಜಮೀನು ಮಾರಾಟಕ್ಕೆ ನಿರ್ಧಾರ

**ಬೆಂಗಳೂರು:** ರಾಜ್ಯ ಸರ್ಕಾರ ಆರ್ಥಿಕ ಸಂಕಷ್ಟ ಹಿನ್ನೆಲೆಯಲ್ಲಿ ಸಂಪನ್ಮೂಲ ಕ್ರೋಢೀಕರಣಕ್ಕೆ ಮತ್ತೊಂದು ಮಾರ್ಗ ಹುಡುಕಿಕೊಂಡಿದ್ದು, ಖಾಸಗಿ ಸಂಘ ಸಂಸ್ಥೆಗಳಿಗೆ ಗುತ್ತಿಗೆ ಕೊಟ್ಟಿರುವ ಸರ್ಕಾರ ಭೂಮಿಯನ್ನು ಅದೇ ಸಂಸ್ಥೆಗಳಿಗೆ ಖರೀದಿಗೆ ಕೊಡಲು ತೀರ್ಮಾನ ಮಾಡಿದೆ.

ಗುರುವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ನಿರ್ಧಾರ ಕೈಗೊಳ್ಳಲಾಗಿದ್ದು, ಬೇಸಾಯ, ಕೈಗಾರಿಕೆ, ಧಾರ್ಮಿಕ, ಶಿಕ್ಷಣ ಸಂಸ್ಥೆಗಳಿಗೆ ಗುತ್ತಿಗೆಗೆ ಕೊಟ್ಟಿರುವ ಭೂಮಿ ಖರೀದಿಗೆ ಅವಕಾಶ ಕಲ್ಪಿಸಲಾಗಿದೆ.

ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ, ಹಾಲಿ ಗುತ್ತಿಗೆ ಪಡೆದಿರುವ ಖಾಸಗಿ ಸಂಘ-ಸಂಸ್ಥೆಗಳಿಗೆ ಮಾರುಕಟ್ಟೆ ದರದಲ್ಲಿ ಖರೀದಿಗೆ ಇದರಿಂದ ಅವಕಾಶ ಸಿಗಲಿದೆ. ಗುತ್ತಿಗೆ ನವೀಕರಣ ಇಲ್ಲ, ಹಾಲಿ ಜಮೀನು ಗುತ್ತಿಗೆಗೆ ಪಡೆದಿರುವ ಸಂಘ-ಸಂಸ್ಥೆಗಳು ಖರೀದಿ ಮಾಡಲ್ಲ ಎಂದರೆ ಸರ್ಕಾರಕ್ಕೆ ವಾಪಸ್ ಪಡೆಯಲಾಗುವುದು ಎಂದು ಹೇಳಿದರು.

ಈಗಾಗಲೇ ಸಂಘ ಸಂಸ್ಥೆಗಳಿಗೆ ನೀಡಿರುವ ಜಮೀನು ಪರಿಶೀಲನೆ ಮಾಡಲಾಗುವುದು. ಒಂದು ವೇಳೆ ಪಡೆದಿರುವ ಉದ್ದೇಶಕ್ಕೆ ಬಳಕೆ ಮಾಡುತ್ತಿದ್ದರೆ, ಅವರಿಗೆ ಒಪ್ಪಿಗೆ ಇದ್ದರೆ ಮಾರಾಟ ಮಾಡಲಾಗುವುದು. ಹಾಗೆಯೇ ಯಾರಾದರೂ ನಿಗದಿತ ಉದ್ದೇಶಕ್ಕೆ ಜಮೀನು ಬಳಸದೆ ಹಾಗೇ ಇಟ್ಟುಕೊಂಡಿದ್ದರೆ ಅಥವಾ ಸ್ವಲ್ಪ ಮಾತ್ರ ಬಳಕೆ ಮಾಡಿದ್ದರೆ ಅದನ್ನು ಮಾತ್ರ ಮಾರಾಟ ಮಾಡಿ ಉಳಿದಿರುವುದನ್ನು ಸರ್ಕಾರ ವಶಕ್ಕೆ ಪಡೆಯಲಿದೆ. ಆದರೆ, ಖರೀದಿ ನಂತರ ಉದ್ದೇಶಿತ ಬಳಕೆ ಬಿಟ್ಟು ಬೇರೆ ಉದ್ದೇಶಕ್ಕೆ ಈ ಜಮೀನನ್ನು ಬಳಕೆ ಮಾಡುವಂತಿಲ್ಲ.



ಸಂಘ-ಸಂಸ್ಥೆಗಳಿಗೆ ಕೊಡಲಾಗಿರುವ ಭೂಮಿ

ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ

9.74 ಲಕ್ಷ ಮನೆಗಳ ನಿರ್ಮಾಣಕ್ಕೆ 10,194 ಕೋಟಿ ರೂ. ಬಿಡುಗಡೆ